ಕನ್ನಡಪ್ರಭ

# ರಾಜ್ಯ ಯುವನೀತಿ ಶೆಟ್ಟರ್‌ಗೆ ಸಲ್ಲಿಕೆ

ಬೆಂಗಳೂರು: ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ಜ್ಞಾನ ಆಯೋಗ ರೂಪಿಸಿರುವ ರಾಜ್ಯ ಯುವ ನೀತಿಯನ್ನು ಮುಖ್ಯಮಂತ್ರಿ ಜಗದೀಶ ಶೆಟ್ಟರ್ ಅವರಿಗೆ ಗುರುವಾರ ಸಲ್ಲಿಸಲಾಯಿತು.

ಯುವ ನೀತಿಗೆ ಸಂಬಂಧಿಸಿ ಇಲಾಖೆ ಹಾಗೂ ಜ್ಞಾನ ಆಯೋಗದ ತಂಡವು ಕಳೆದ ಒಂದು ವರ್ಷದಿಂದ 75 ಪುಟಗಳ ವರದಿ ತಯಾರಿಸಿದೆ. ಈ ತಂಡ 10 ಶಿಫಾರಸುಗಳನ್ನು ಸರ್ಕಾರಕ್ಕೆ ಮಾಡಿದೆ. ಏತನ್ಮಧ್ಯೆ ಯುವನೀತಿಯ ಜತೆಗೆ ಕ್ರೀಡಾ ಕ್ಷೇತ್ರದ ಅಭ್ಯುದಯಕ್ಕಾಗಿ ರಾಜ್ಯ ಕ್ರೀಡಾ ನೀತಿ ಹೊರತರಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ಕಳೆದ ವರ್ಷದ ಬಜೆಟ್‌ನಲ್ಲಿಯೇ ಯುವ ಜನತೆಯ ಅಭಿವೃದ್ಧಿಗಾಗಿ ಸುಮಾರು ₹4327 ಕೋಟಿ ಅನುದಾನ ಮೀಸಲಿರಿಸಲಾಗಿದೆ. ಇದಲ್ಲದೇ ಯುವ ನೀತಿ ಅನುಷ್ಠಾನಕ್ಕೆ ₹25 ಕೋಟಿ ಹಣ ನೀಡಲಾಗಿದೆ. ನೀತಿಯ ಸಮರ್ಪಕ ಅನುಷ್ಠಾನಕ್ಕೆ ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ವರದಿ ಸ್ವೀಕರಿಸಿದ ಮುಖ್ಯಮಂತ್ರಿ ಜಗದೀಶ ಶೆಟ್ಟರ್ ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಯುವಜನ ಸೇವೆ ಮತ್ತು ಕ್ರೀಡಾ ಸಚಿವ ಅಪ್ಪಚ್ಚು ರಂಜನ್ ಮಾತನಾಡಿ, ಇನ್ನೆರಡು ತಿಂಗಳಲ್ಲಿ ನೂತನ ಕ್ರೀಡಾ ನೀತಿ ರೂಪಿಸಲಾಗುತ್ತದೆ. ಈ ಮೂಲಕ ರಾಜ್ಯದ ಕ್ರೀಡಾ ಕ್ಷೇತ್ರದ ಅಭಿವೃದ್ಧಿಗೆ ವಿಶೇಷ ಯೋಜನೆ ತಯಾರಿಸಲಾಗುವುದು ಎಂದು ಹೇಳಿದರು.

ಕ್ರೀಡಾಪಟುಗಳಿಗೆ ಮತ್ತೊಂದು ಖುಷಿ ಸುದ್ದಿ ನೀಡಿರುವ ಸಚಿವರು, ಉದ್ಯೋಗ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಕ್ರೀಡಾಳುಗಳಿಗೂ ಮೀಸಲಾತಿ ನೀಡುವ ಕುರಿತು ವಿಧೇಯಕ ಮಂಡಿಸಲು ತಯಾರಿ ನಡೆಸಲಾಗಿದೆ. ಈ ಮೂಲಕ ಕ್ರೀಡಾಪಟುಗಳಿಗೆ ಆರ್ಥಿಕ ಭದ್ರತೆ ನೀಡಲು ಸರ್ಕಾರ ಮುಂದಾಗಿದೆ ಎಂದು ಸಚಿವ ರಂಜನ್ ತಿಳಿಸಿದರು.

### ಪ್ರಮುಖ ಶಿಫಾರಸು

- ಯುವ ಪ್ರತಿಭಾ ಕೋಶ ರಚಿಸಬೇಕು.
- ಸ್ವಯಂ ಸೇವಾ ಚಟುವಟಿಕೆಗೆ ವರ್ಷದ 7 ದಿನಗಳನ್ನು ಯುವಕರು ಮೀಸಲಿರಿಸಬೇಕು.
- ಕಲಿಕೆ ಜತೆ ಗಳಿಕೆ ಅಭಿಯಾನ ಪ್ರಾರಂಭಿಸಬೇಕು.
- ಪ್ರತಿ ವಾರ್ಡ್ ಮಟ್ಟದಲ್ಲಿ ಯುವ ಕೇಂದ್ರ ಆರಂಭಿಸಬೇಕು.
- ವಿದ್ಯಾರ್ಥಿ ಕೇಂದ್ರಿತ ಶಿಕ್ಷಣ ಕಾರ್ಯಪಡೆ ರಚಿಸಬೇಕು.
- ಕೃಷಿ, ಸ್ಥಳೀಯ ಸಂಪನ್ಮೂಲ ಆಧಾರಿತ ಉದ್ಯಮಶೀಲ ಚಟುವಟಿಕೆಗೆ ಪ್ರೋತ್ಸಾಹ ನೀಡಬೇಕು.
- ಸ್ವಾಮಿ ವಿವೇಕಾನಂದ ಯುವ ಸಬಲೀಕರಣ ನಿಗಮ ಪ್ರಾರಂಭಿಸಬೇಕು.
- ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಎಂದು ಮರು ನಾಮಕರಣ ಮಾಡಬೇಕು.
- ಸ್ವಾಮಿ ವಿವೇಕಾನಂದರ 150ನೇ ಜನ್ಮ ದಿನಾಚರಣೆ ಅಂಗವಾಗಿ ಜ.12ರಂದು ಯುವನೀತಿಯನ್ನು ಅನುಷ್ಠಾನಕ್ಕೆ ತರಬೇಕು.